ಕೆಲವೊಮ್ಮೆ ಅನಿರೀಕ್ಷಿತ ಕಾರಣಗಳಿಗಾಗಿ ಅನಿಯಮಿತ ಲೋಡ್ ಶೆಡ್ಡಿಂಗ್‌ನ್ನು ಮಾಡಬೇಕಾಗುತ್ತದೆ. ಅಂತಹ ಸಂದರ್ಭಗಳಲ್ಲಿ, ವಿದ್ಯುತ್ ಬಳಕೆದಾರರಿಗೆ ಹೆಚ್ಚು ಅನಾನುಕೂಲವಾಗದಂತೆ ಆದಷ್ಟು ಕಡಿಮೆ ಅವಧಿಗೆ ಲೋಡ್ ಶೆಡ್ಡಿಂಗ್‌ನ್ನು ನಿರ್ವಹಿಸಲಾಗುವುದು.

ವಿಷಯ: ಕೃಷಿ ಉತ್ಪನ್ನಗಳ ಮಾರಾಟ ಸಮಿತಿಗೆ ಚುನಾವಣೆ ನಡೆಸುವ ಬಗ್ಗೆ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1539 (2184)

ಶ್ರೀ ಆರ್. ಎಲ್. ಜಾಲಪ್ಪ (ದೊಡ್ಡಬಳ್ಳಾಪುರ):- ಮಾನ್ಯ ಸಹಕಾರ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ

ಅ ಕೃಷಿ ಉತ್ಪನ್ನಗಳ ಮಾರಾಟ ಸಮಿತಿಗೆ ಚುನಾವಣೆ ನಡೆಸುವ ಆಲೋಚನೆ ಸರ್ಕಾರಕ್ಕಿದೆಯೆ.

ಆ ಹಾಗಿದ್ದಲ್ಲಿ, ಎಷ್ಟು ಸಮಯ ದೊಳಗಾಗಿ ಚುನಾವಣೆಗಳನ್ನು ನಡೆಸಲಾಗುವುದು.

ಶ್ರೀ ಎಸ್. ಆರ್. ಮೋರೆ (ಸಹಕಾರ ರಾಜ್ಯ ಸಚಿವರು)-

ಅ ಕರ್ನಾಟಕ ಕೃಷಿ ಉತ್ಪನ್ನ ಮಾರಾಟ (ನಿಯಂತ್ರಣ) ಕಾಯ್ದೆ 1966ಕ್ಕೆ ಕರ್ನಾಟಕ ಕಾಯ್ದೆ ಸಂಖ್ಯೆ: 16: 1991ರ ಮೂಲಕ ತಿದ್ದುಪಡಿ ಮಾಡಿದ್ದರಿಂದ ಕರ್ನಾಟಕ ಕೃಷಿ ಉತ್ಪನ್ನ ಮಾರಾಟ (ನಿ) ನಿಯಮಾವಳಿ 1968ರ ಚುನಾವಣೆಗೆ ಸಂಬಂಧಿಸಿದ ನಿಯಮಗಳ ತಿದ್ದುಪಡಿ ಸರ್ಕಾರದ ಪರಿಶೀಲನೆಯಲ್ಲಿದೆ. ಮಾರುಕಟ್ಟೆ ಕ್ಷೇತ್ರದ ವಿವರಣೆ ತಿದ್ದುಪಡಿ ಮಾಡಿರುವ ಪ್ರಯುಕ್ತ ಕೆಲವೊಂದು ಮಾರುಕಟ್ಟೆ ಸಮಿತಿಗಳ ಕ್ಷೇತ್ರ ಸಂಯೋಜನೆ:ವಿಭಜನೆ:ಮಾರುಕಟ್ಟೆ ಕ್ಷೇತ್ರಗಳ ಬದಲಾವಣೆ ಸಹ ಸರ್ಕಾರದ ಪರಿಶೀಲನೆಯಲ್ಲಿರುತ್ತದೆ. ಇದಾದನಂತರ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗಳ ಚಾನಾವಣೆ ದಿನಾಂಕದ ಬಗ್ಗೆ ಸರ್ಕಾರ ತೀರ್ಮಾನ ತೆಗೆದುಕೊಳ್ಳುವುದು.

ವಿಷಯ: ಸಹಕಾರಿ ಸಂಘಗಳ ಬೆಳೆ ಸಾಲದ ಬಗ್ಗೆ.

ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ : 1541 (2187)

ಶ್ರೀ ಆರ್. ಎಲ್. ಜಾಲಪ್ಪ (ದೊಡ್ಡಬಳ್ಳಾಪುರ):- ಮಾನ್ಯ ಸಹಕಾರ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ 1987-88ರಿಂದ ಇಲ್ಲಿಯವರೆಗೆ ಸಹಕಾರ ಸಂಘಗಳ ಮೂಲಕ ಕೊಟ್ಟಿರುವ ಅಲ್ಪಾವಧಿ ಬೆಳೆ ಸಾಲ ಎಷ್ಟು (ವರ್ಷವಾರು ವಿವರಗಳನ್ನು ನೀಡುವುದು)

ಆ ಇದರಲ್ಲಿ ಇಲ್ಲಿಯವರೆಗೆ ಶೇಕಡಾ ಎಷ್ಟು ವಸೂಲಿ ಆಗಿದೆ. (ವರ್ಷವಾರು ವಿವರಗಳನ್ನು ನೀಡುವುದು)

ಇ ಅಲ್ಪಾವಧಿ ಸಾಲವನ್ನು ಇಲ್ಲಿಯವರೆಗೆ ಹಿಂತಿರುಗಿಸಿದವರ ಮೇಲೆ ಕ್ರಮ ಕೈಗೊಳ್ಳಲಾಗಿದೆಯೇ.

ಈ ಹಾಗಿದ್ದಲ್ಲಿ, ಸಾಲ ವಸೂಲಿಗಾಗಿ ಕೈಗೊಂಡ ಕ್ರಮಗಳೇನು ?

ಶ್ರೀ ಎಸ್. ಆರ್. ಮೋರೆ (ಸಹಕಾರ ರಾಜ್ಯ ಸಚಿವರು)-

ಅ ರೂ.71,928-97 ಲಕ್ಷಗಳು

ವರ್ಷ (ಸಹಕಾರಿ)	ರೂಪಾಯಿ ಲಕ್ಷಗಳಲ್ಲಿ
1987-88	23359.47
1988-89	24806.82
1989-90	14907.80
1990-91	5892.62
1991-31.1.92	2962.26

ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕುಗಳಿಂದ ನೀಡಿದ ಅಲ್ಪಾವಧಿ ಸಾಲ.